All India Radio: Bangalore
Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

10.03.2025 6.40 P.M.

*****************

ಮುಖ್ಯಾಂಶಗಳು

- ವಿಧಾನಸಭೆಯಲ್ಲಿ ಗ್ರೇಟರ್ ಬೆಂಗಳೂರು ವಿಧೇಯಕ ಅಂಗೀಕಾರ; ಪ್ರತಿಪಕ್ಷಗಳಿಂದ ಸಭಾತ್ಯಾಗ
- ಸರ್ಕಾರಿ ವೈದ್ಯರು ಆಸ್ಪತ್ರೆಗಳಲ್ಲಿ ಬೆಳಗ್ಗೆ ೯ ಗಂಟೆಯಿಂದ ೪ ಗಂಟೆಯವರೆಗೆ ಕಾರ್ಯ ನಿರ್ವಹಿಸುವುದು ಕಡ್ಡಾಯ - ಸಚಿವ ಶರಣಪ್ರಕಾಶ್ ಪಾಟೀಲ್
- ಚಿಂಕಾರ ವನ್ಯಜೀವಿ ಧಾಮದಲ್ಲಿ ಕಳ್ಳಬೇಟೆಯ ಮೇಲೆ ನಿಗಾ- ಅರಣ್ಯ ಸಚಿವ ಈಶ್ವರ್ ಖಂಡ್ರೆ
- ಅಕ್ರಮ ಚಿನ್ನ ಕಳ್ಳಸಾಗಟ ಪ್ರಕರಣ; ಸಿಬಿಐ ತನಿಖೆಗೆ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಆಗ್ರಹ
- ರಾಜ್ಯದಲ್ಲಿ ಮುಂದುವರಿದ ಒಣಹವೆ; ಸಿಂಧನೂರಿನಲ್ಲಿ ಗರಿಷ್ಠ ೪೧.೪ ಡಿಗ್ರಿ ಉಷ್ಣಾಂಶ ದಾಖಲು

*****************

ಬೆಂಗಳೂರು ಮಹಾನಗರ ಪಾಲಿಕೆ ವಿಭಜನೆ ಕುರಿತ ಗ್ರೇಟರ್ ಬೆಂಗಳೂರು ವಿಧೇಯಕಕ್ಕೆ ವಿಧಾನಸಭೆಯಲ್ಲಿ ಅಂಗೀಕಾರ ದೊರೆತಿದೆ. ವಿರೋಧಪಕ್ಷಗಳ ಸದಸ್ಯರ ಸಭಾತ್ಯಾಗದ ನಡುವೆ ಅನುಮೋದನೆ ದೊರೆಯಿತು.

ವಿಧೇಯಕ ವನ್ನು ವಿರೋಧಿಸಿ ಪ್ರತಿಪಕ್ಷಗಳಾದ ಬಿಜೆಪಿ ಹಾಗೂ ಜೆಡಿಎಸ್ ಸದಸ್ಯರು ಸಭಾತ್ಯಾಗ ನಡೆಸಿ, ಸರ್ಕಾರದ ವಿರುದ್ಧ ಘೋಷಣೆ ಕೂಗಿದರು.

ಇದಕ್ಕೂ ಮುನ್ನ ವಿಧೇಯಕ ಕುರಿತು ಮಾತನಾಡಿದ ಉಪಮುಖ್ಯಮಂತ್ರಿ ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವ ಡಿ.ಕೆ.ಶಿವಕುಮಾರ್ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯನ್ನು ಏಳು ವಲಯಗಳನ್ನಾಗಿ ವಿಂಗಡಿಸಲು ಉದ್ದೇಶಿಸಲಾಗಿದೆ. ಆಡಳಿತ ವಿಕೇಂದ್ರೀಕರಣ ಮಾಡಬೇಕೆಂದಬ ಉದ್ದೇಶ ದಿಂದ ವಿಧೇಯಕವನ್ನು ತರಲಾಗಿದೆ ಎಂದು ಹೇಳಿದರು.

ಬಳಿಕ ಸಭಾಧ್ಯಕ್ಷ ಯು.ಟಿ.ಖಾದರ್, ವಿಧೇಯಕವನ್ನು ಮತಕ್ಕೆ ಹಾಕಿದಾಗ ಆಡಳಿತ ಪಕ್ಷದ ಸದಸ್ಯರು ಧ್ವನಿಮತದಿಂದ ಅಂಗೀಕಾರ ನೀಡಿದರು.

ವಿಧೇಯಕಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಪ್ರತಿಪಕ್ಷ ನಾಯಕ ಆರ್.ಅಶೋಕ ಇದು ಬೆಂಗಳೂರಿಗರ ಪಾಲಿಗೆ ಮರಣ ಶಾಸನ ಎಂದು ತಿಳಿಸಿದ್ದಾರೆ. ಬಿಬಿಎಂಪಿ ವಿಭಜನೆಯಿಂದ ಆಡಳಿತಾತ್ಮಕ ವೆಚ್ಚ ಹೆಚ್ಚಾಗಲಿದ್ದು, ಬೆಂಗಳೂರಿನ ಅಭಿವೃದ್ಧಿಗೆ ಅಡ್ಡಿಯಾಗಲಿದೆ ಎಂದು ಆರೋಪಿಸಿದ್ದಾರೆ.

ಯಾವುದೇ ಕಾರಣಕ್ಕೂ ಬಿಬಿಎಂಪಿ ವಿಭಜನೆ ಮಾಡಬಾರದು ಎಂದು ಒತ್ತಾಯಿಸಿದ್ದಾರೆ.

*****************

ಸರ್ಕಾರಿ ಆಸ್ಪತ್ರೆಗಳಲ್ಲಿ ಇನ್ನು ಮುಂದೆ ಕರ್ತವ್ಯ ನಿರ್ವಹಿಸುವ ವೈದ್ಯರು ಬೆಳಗ್ಗೆ ೯ ಗಂಟೆಯಿಂದ ಸಂಜೆ ೪ ಗಂಟೆವರೆಗೆ ಕಡ್ಡಾಯವಾಗಿ ಕಾರ್ಯ ನಿರ್ವಹಿಸಬೇಕು ಎಂದು ವೈದ್ಯಕೀಯ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಪರಿಷತ್‌ನಲ್ಲಿ ತಿಳಿಸಿದ್ದಾರೆ.

ಕಾಂಗ್ರೆಸ್ ಸದಸ್ಯೆ ಬಲ್ಕಿಶ್ ಬಾನು ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಸರ್ಕಾರಿ ವೈದ್ಯರು ಯಾವುದೇ ಕಾರಣಕ್ಕೂ ಬೇರೆ ಸ್ಥಳಗಳಲ್ಲಿ ಕಾರ್ಯ ನಿರ್ವಹಿಸುವಂತಿಲ್ಲ ಎಂದು ಸೂಚನೆ ನೀಡಿದ್ದಾರೆ.

ಈ ಮೊದಲು ೨ ಗಂಟೆಗಳ ನಂತರ ೧ ಗಂಟೆ ಕಾರ್ಯ ನಿರ್ವಹಿಸಲು ಅವಕಾಶ ನೀಡಲಾಗಿತ್ತು. ಆದರೆ ವೈದ್ಯರು ೧ ಗಂಟೆ ಮುಂಚಿತವಾಗಿ ಹೋಗುವುದು, ಇಲ್ಲವೇ ೧ ಗಂಟೆ ತಡವಾಗಿ ಬರುತ್ತಾರೆಂಬ ಆರೋಪ ಕೇಳಿಬರುತ್ತಿದೆ. ಇದನ್ನು ತಡೆಗಟ್ಟಲು ಈ ಕ್ರಮ ತೆಗೆದುಕೊಂಡಿದ್ದಾಗಿ ಸಚಿವರು ಸಮರ್ಥಿಸಿಕೊಂಡಿದ್ದಾರೆ.

ಒಂದು ವೇಳೆ ವೈದ್ಯರು, ಉಲ್ಲಂಘನೆ ಮಾಡಿರುವುದು ಕಂಡುಬಂದರೆ ಶಿಸ್ತುಕ್ರಮ ಜರುಗಿಸುವುದಾಗಿ ಎಚ್ಚರಿಸಿದ್ದಾರೆ.

ವೈದ್ಯರು ಕರ್ತವ್ಯಕ್ಕೆ ಹಾಜರಾಗುವ ಸಂದರ್ಭದಲ್ಲಿ ನಾಲ್ಕು ಬಾರಿ ಬಯೋಮೆಟ್ರಿಕ್‌ಗೆ ತಮ ಹಸ್ತಮುದ್ರೆ ಹಾಕಬೇಕು ಎಂದು ನಿರ್ದೇಶನ ನೀಡಿದ್ದಾರೆ.

*****************

ತುಮಕೂರು ಜಿಲ್ಲೆ ಬುಕಾಪಟ್ಟಣ ಚಿಂಕಾರ ವನ್ಯಜೀವಿ ಧಾಮದಲ್ಲಿ ಪ್ರಾಣಿಗಳಿಗೆ ಆಹಾರ ಒದಗಿಸಲು ಹುಲ್ಲು ಬೀಜ ಬಿತ್ತನೆ, ನಾಟಿ ಮಾಡಲಾಗುತ್ತಿದೆ ಎಂದು ಅರಣ್ಯ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.

ವಿಧಾನಪರಿಷತ್ತಿನಲ್ಲಿಂದು ಸದಸ್ಯ ಚಿದಾನಂದ್ ಎಂ ಗೌಡ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಹುಲ್ಲು ಗಾವಲಿನಲ್ಲಿ ಬೆಳೆದಿರುವ ಲಾಂಟನಾ ತೆರವಿಗೂ ಕ್ರಮಕೈಗೊಳ್ಳಲಾಗಿದೆ ಎಂದು ಹೇಳಿದ್ದಾರೆ.

ಈ ಅರಣ್ಯದಲ್ಲಿ ಪ್ರಾಣಿಗಳಿಗೆ ಬೇಸಿಗೆಯಲ್ಲಿ ನೀರಿನ ಕೊರತೆ ಎದುರಾಗದಂತೆ ಹಾಲಿ ಇರುವ ಕಟ್ಟೆಗಳಲ್ಲಿ ಹೂಳು ತೆಗೆಯುವುದು, ನಾಲಾ ಬದು, ಚೆಕ್ ಡ್ಯಾಂ ನಿರ್ಮಾಣ ಮಾಡುವ ಮೂಲಕ ನೀರು ಸಂಗ್ರಹ ಹೆಚ್ಚಿಸಲಾಗುತ್ತಿದೆ.

ಚಿಂಕಾರಾ ವನ್ಯಜೀವಿಧಾಮದಲ್ಲಿ ಕಳ್ಳ ಬೇಟೆಯ ಮೇಲೆ ನಿರಂತರ ನಿಗಾ ಇಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಕಾಡ್ಗಿಚ್ಚು ನಿಯಂತ್ರಿಸಲು ಹೊಸ ಬೆಂಕಿ ರೇಖೆ ನಿರ್ಮಾಣ, ಹಳೆಯ ಬೆಂಕಿ ರೇಖೆ ನಿರ್ವಹಣೆ, ಕಾವಲುಗಾರರ ನೇಮಕ, ಗಸ್ತು ನಿಯೋಜನೆ, ಸೇರಿ ಎಲ್ಲ ಮುಂಜಾಗರೂಕತಾ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

*****************

ನಟಿ ರನ್ಯಾ ರಾವ್ ಅಕ್ರಮ ಚಿನ್ನ ಕಳ್ಳಸಾಗಾಟ ಪ್ರಕರಣದಲ್ಲಿ ಇಬ್ಬರು ಸಚಿವರು ಭಾಗಿಯಾಗಿದ್ದು, ಅವರ ಹೆಸರು ಬಹಿರಂಗಪಡಿಸಬೇಕು ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಆಗ್ರಹಿಸಿದ್ದಾರೆ.

ನವದೆಹಲಿಯಲ್ಲಿ ಮಾತನಾಡಿದ ಅವರು, ಈ ಕುರಿತಂತೆ ಸಿಬಿಐ ತನಿಖೆ ನಡೆಸುವಂತೆ ಒತ್ತಾಯಿಸಿದ್ದಾರೆ. ಅಧಿಕಾರಿಗಳು ನಟಿಗೆ ಬೆಂಬಲ ನೀಡಿರುವ ಸಾಧ್ಯತೆಯಿದೆ ಎಂದು ಅವರು ತಿಳಿಸಿದ್ದಾರೆ.

ತಮ್ಮ ಅಧಿಕಾರವಧಿಯಲ್ಲಿ ಕೆಐಡಿಬಿ ಯಿಂದ ಜಮೀನು ನೀಡಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಇದರಲ್ಲಿ ತಮ್ಮ ಪಾತ್ರವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ ನಟಿಯ ಒಡೆತನದ ಕಂಪನಿಗೆ ಹಣ ಪಾವತಿ ಮಾಡದ ಹಿನ್ನೆಲೆಯಲ್ಲಿ ಜಮೀನು ನೀಡಿಲ್ಲ ಎಂದು ಹೇಳಿದ್ದಾರೆ.

ಧ್ವನಿ: ಬಸವರಾಜ ಬೊಮ್ಮಾಯಿ, ಮಾಜಿ ಮುಖ್ಯಮಂತ್ರಿ

*****************

ಇದೇ ೨೭ರಿಂದ ೩೧ರವರೆಗೆ ಆಂಧ್ರಪ್ರದೇಶದ ಶ್ರೀಶೈಲಂನಲ್ಲಿ ಯುಗಾದಿ ಮಹೋತ್ಸವ ನಡೆಯಲಿದ್ದು, ಉತ್ತರ ಕರ್ನಾಟಕದಿಂದ ಹೆಚ್ಚಿನ ಭಕ್ತರು ತೆರಳಲಿದ್ದಾರೆ. ಯುಗಾದಿ ಹಬ್ಬದ ಪ್ರಯುಕ್ತ

ದೇವಾಲಯದ ಆಡಳಿತ ಮಂಡಳಿ ಭಕ್ತರ ಅನುಕೂಲಕ್ಕಾಗಿ ವಿವಿಧ ವ್ಯವಸ್ಥೆಗಳನ್ನು ಮಾಡಿದೆ ಎಂದು ಆಂಧ್ರಪ್ರದೇಶ ಸರ್ಕಾರದ ಧಾರ್ಮಿಕ ದತ್ತಿ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

ಈ ಬಾರಿ ಪ್ರತಿದಿನ ನಿರ್ದಿಷ್ಟ ಸಮಯಗಳಲ್ಲಿ ನಾಲ್ಕು ಹಂತಗಳಾಗಿ ದರ್ಶನಕ್ಕೆ ಅವಕಾಶ ನೀಡಲಾಗಿದೆ. ಯುಗಾದಿ ಉತ್ಸವದ ದಿನಗಳಲ್ಲಿ ಮಲ್ಲಿಕಾರ್ಜುನ ಸ್ವಾಮಿಯ ಸ್ಪರ್ಶ ದರ್ಶನಕ್ಕೆ ಅವಕಾಶ ನೀಡಲಾಗುವುದಿಲ್ಲ ಎಂದು ಇಲಾಖೆ ಸ್ಪಷ್ಟಪಡಿಸಿದೆ.

*****************

ಮಂಡ್ಯ- ಸರ್ಕಾರದ ಗ್ಯಾರಂಟಿ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ಶೇಕಡ ೧೦೦ ರಷ್ಟು ಅನುಷ್ಠಾನಗೊಳಿಸಲು ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಮಂಡ್ಯ ಜಿಲ್ಲಾ ಗ್ಯಾರಂಟಿ ಯೋಜನೆಯ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಚಿಕ್ಕಲಿಂಗಯ್ಯ ತಿಳಿಸಿದ್ದಾರೆ.

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಯ ಅನುಷ್ಠಾನ ಪ್ರಾಧಿಕಾರದ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬಡ ಜನರಿಗೆ ಗ್ಯಾರಂಟಿ ಯೋಜನೆಗಳು ಶಕ್ತಿಯನ್ನು ತುಂಬಿದೆ. ಗೃಹ ಲಕ್ಷ್ಮಿ ಯೋಜನೆಯಡಿ ೪೫ ಲಕ್ಷಕ್ಕೂ ಹೆಚ್ಚು ಅರ್ಹ ಫಲಾನುಭವಿಗಳಿದ್ದೂ ಅಕ್ಟೋಬರ್ ಮಾಹೆಯ ವರೆಗೆ ಶೇಕಡ ೯೯.೨೮ ರಷ್ಟು ಮಹಿಳೆಯರಿಗೆ ಹಣ ವರ್ಗಾವಣೆ ಮಾಡಲಾಗಿದೆ. ನವೆಂಬರ್ ಮತ್ತು ಡಿಸೆಂಬರ್ ಮಾಹೆಯ ಹಣವನ್ನು ಈಗಾಗಲೇ ಬಿಡುಗಡೆಗೊಳಿಸಿದ್ದು, ಶೀಘ್ರವೇ ಅರ್ಹ ಫಲಾನುಭವಿಗಳ ಖಾತೆಗೆ ಹಣ ಜಮೆಯಾಗಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

*****************

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಮೆಚ್ಚುಗೆ ಪಡೆದಿದ್ದ ಕಲಾಪೋಷಕ ಕಾಳಮಂಜಿ ವೆಂಕಟಗಿರಿಯಪ್ಪ ಶ್ರೀ ನಿವಾಸ್ ಅನಾರೋಗ್ಯದಿಂದ ನಿಧನ ಹೊಂದಿದ್ದಾರೆ.

೨೦೨೨ ರ ಡಿಸೆಂಬರ್ ೨೫ ರ ಮನ್ ಕೀ ಬಾತ್ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ, ಹೋಟೆಲ್ ಉದ್ಯಮಿಯಾಗಿದ್ದುಕೊಂಡು ಕಲಾಸೇವೆಯಲ್ಲಿ ತೊಡಗಿದ್ದ ಕಾಳಮಂಜಿ ವೆಂಕಟಗಿರಿಯಪ್ಪ ಶ್ರೀನಿವಾಸ ಅವರ ಕಲಾಸೇವೆಯನ್ನು ಶ್ಲಾಘಿಸಿದ್ದರು.

*****************

ವೈಜ್ಞಾನಿಕವಾಗಿ ಅಭಿವೃದ್ಧಿಪಡಿಸಲಾದ ಕೃಷಿ ಉತ್ಪನ್ನಗಳ ದೇಸಿ ತಳಿಗಳು ಪೋಷಕಾಂಶಗಳಲ್ಲಿ ಸಮೃದ್ಧವಾಗಿವೆ ಎಂದು ಗದಗ ಜಿಲ್ಲಾ ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ತಾರಾಮಣಿ ಜಿ. ಎಚ್. ತಿಳಿಸಿದ್ದಾರೆ.

ಗದಗ ಜಿಲ್ಲೆಯ ಹುಲಕೋಟಿ ಗ್ರಾಮದ ಕೆ.ಎಚ್.ಪಾಟೀಲ ಕೃಷಿ ವಿಜ್ಞಾನ ಕೇಂದ್ರದಲ್ಲಿ ದೇಸಿ ತಳಿ ಸಂರಕ್ಷಣೆ ಕುರಿತು ಜರುಗಿದ ರೈತರ ಕಾರ್ಯಾಗಾರ ಉದ್ಘಾಟಿಸಿ, ಮಾತನಾಡಿದ ಅವರು, ಕೃಷಿ ದೇಸಿ ತಳಿಗಳನ್ನು ಸಂರಕ್ಷಿಸಿದರೆ ಬಹಳಷ್ಟು ರೋಗಗಳನ್ನು ದೂರ ಮಾಡಬಹುದಾಗಿದೆ. ಮಣ್ಣು ಮತ್ತು ನೀರಿನ ಸಂರಕ್ಷಣೆ ಕೂಡ ಸಾಧ್ಯ ಎಂದು ಸ್ಪಷ್ಟಪಡಿಸಿದ್ದಾರೆ.

*****************

ರಾಜ್ಯದಲ್ಲಿ ಮುಂದಿನ ಐದು ದಿನಗಳ ಕಾಲ ಒಣಹವೆ ಮುಂದುವರಿಯಲಿದ್ದು, ಮುಂದಿನ ಎರಡು ದಿನಗಳ ಕಾಲ ಕರಾವಳಿಯಲ್ಲಿ ಬಿಸಿ ತಾಪಮಾನವಿರುವ ಸಾಧ್ಯತೆಯಿದೆ.

ರಾಯಚೂರಿನ ಸಿಂಧನೂರಿನಲ್ಲಿ ಅತಿ ಹೆಚ್ಚು ೪೧.೪ ಡಿಗ್ರಿ ಉಷ್ಣಾಂಶ ದಾಖಲಾಗಿದೆ. ಉತ್ತರಕನ್ನಡ ಜಿಲ್ಲೆಯ ಮುಂಡಗೋಡು, ಹಳಿಯಾಳ, ರಾಯಚೂರಿನ ಸಿಂಧನೂರು, ಕಲಬುರಗಿಯ ಕಲಗಿ, ಧಾರವಾಡದ ಕಲಘಟಗಿ, ಬಾಗಲಕೋಟೆಯ ರಬಕವಿ ಬನಹಟ್ಟಿ ೪೦ ಡಿಗ್ರಿ ಉಷ್ಣಾಂಶ ದಾಖಲಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.

*****************

ಇನ್ನು ಸಂಕ್ಷಿಪ್ತ ಸುದ್ದಿಗಳು...

- ಚಿತ್ರದುರ್ಗ ಜಿಲ್ಲೆಯಲ್ಲಿ ಹಕ್ಕಿಜ್ವರದ ಯಾವುದೇ ಪ್ರಕರಣಗಳು ಇದುವರೆಗೂ ವರದಿಯಾಗಿಲ್ಲ, ಹೀಗಾಗಿ ಯಾವುದೇ ಆತಂಕ ಪಡುವ ಅಗತ್ಯವಿರುವುದಿಲ್ಲ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.
- ಕೋಲಾರ ಜಿಲ್ಲೆಯಲ್ಲಿ ಅತಿ ಹೆಚ್ಚು ಉದ್ಯೋಗವಕಾಶಗಳನ್ನು ಸೃಷ್ಟಿಸುವ ಶಕ್ತಿಯಿರುವ ಕೃಷಿ, ರೇಷ್ಮೆ, ತೋಟಗಾರಿಕೆ ಹಾಗೂ ಪಶುಸಂಗೋಪನೆ ವಲಯಕ್ಕೆ ಬ್ಯಾಂಕ್ ಗಳು ಹೆಚ್ಚಿನ ಸಾಲ ಸೌಲಭ್ಯ ಕಲ್ಪಿಸಬೇಕು ಎಂದು ಜಿಲ್ಲಾ ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ ಪ್ರವೀಣ್ ಪಿ.ಬಾಗೇವಾಡಿ ನಿರ್ದೇಶನ ನೀಡಿದ್ದಾರೆ.
- ಚಿತ್ರದುರ್ಗ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ವತಿಯಿಂದ ಇದೇ ೧೩ರಂದು ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ನೇಮಕಾತಿ ಸಂದರ್ಶನ ನಡೆಯಲಿದೆ. ಅಭ್ಯರ್ಥಿಗಳು ಅಗತ್ಯ ದಾಖಲೆಗಳಾದ ಬಯೋಡಾಟಾ ಪ್ರತಿಗಳು, ಫೋಟೊ, ವಿದ್ಯಾರ್ಹತೆಯ ಜೆರಾಕ್ಸ್ ಪ್ರತಿಗಳೊಂದಿಗೆ ಭಾಗವಹಿಸಬೇಕು ಎಂದು ಉದ್ಯೋಗಾಧಿಕಾರಿ ಡಿ.ರವೀಂದ್ರ ತಿಳಿಸಿದ್ದಾರೆ.

- ಸರ್ಕಾರಿ ನೌಕರರು ಕ್ರೀಡಾ ಆಸಕ್ತಿಯನ್ನು ಬೆಳಸಿಕೊಳ್ಳಬೇಕು ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ಸಲಹೆ ನೀಡಿದ್ದಾರೆ. ಸ್ಪರ್ಧೆಯಲ್ಲಿ ಗೆಲ್ಲುವುದಕ್ಕಿಂತ ಕ್ರೀಡಾ ಕೂಟದಲ್ಲಿ ಪಾಲ್ಗೊಳ್ಳುವುದು ಮುಖ್ಯ ಎಂದು ತಿಳಿಸಿದ್ದಾರೆ.
- ಸರ್ಕಾರಿ ನೌಕರರು ಆಯಾ ದಿನಗಳ ಕೆಲಸಗಳನ್ನು ಅದೇ ದಿನ ಪೂರ್ಣಗೊಳಿಸುವ ನೈಪುಣ್ಯ ಹೆಚ್ಚಿಸಿಕೊಳ್ಳಬೇಕು ಎಂದು ಹಾವೇರಿ ಜಿಲ್ಲಾಧಿಕಾರಿ ಡಾಕ್ಟರ್ ವಿಜಯಕುಮಾರ್ ದಾನಮ್ಮನವರ ಕಿವಿ ಮಾತು ಹೇಳಿದ್ದಾರೆ.
- ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕಿನ ಕನಸವಾಡಿಯಲ್ಲಿ ಏಪ್ರಿಲ್ ೧೨ ಮತ್ತು ೧೩ರಂದು ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ನಡೆಯಲಿರುವ ಬೆಂಗಳೂರು ಗ್ರಾಮಾಂತರ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಜಿಲ್ಲಾಡಳಿತದಿಂದ ಅಗತ್ಯ ಸಹಕಾರ ನೀಡಲಾಗುವುದು ಎಂದು ಜಿಲ್ಲಾಧಿಕಾರಿ ಎ.ಬಿ.ಬಸವರಾಜು ತಿಳಿಸಿದ್ದಾರೆ.
- ಇಂದು ಕೇಂದ್ರ ಕೈಗಾರಿಕಾ ಭದ್ರತಾ ಪಡೆ ಸ್ಥಾಪನಾ ದಿನ. ಈ ಹಿನ್ನೆಲೆ ಹಲವು ಗಣ್ಯರು ರಾಷ್ಟ್ರಕ್ಕೆ ಸೇವೆ ಸಲ್ಲಿಸುವ ಸಿಐಎಸ್‌ಎಫ್ ಸೈನಿಕರ ಶೌರ್ಯ ಮತ್ತು ಕರ್ತವ್ಯ ಪ್ರಜ್ಞೆಗೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಗಣ್ಯರು ನಮನ ಸಲ್ಲಿಸಿದ್ದಾರೆ.
- ಚಿಕ್ಕಬಳ್ಳಾಪುರ ನಗರಸಭೆಯ ಪ್ರಸಕ್ತ ಸಾಲಿನ ಆಯವ್ಯಯ ಮಂಡನೆಯ ಪೂರ್ವಭಾವಿ ಸಭೆಯ ಭಾಗವಾಗಿ ಇಂದು ನಗರಸಭೆ ಅಧ್ಯಕ್ಷ ಗಜೇಂದ್ರ ಅಧ್ಯಕ್ಷತೆಯಲ್ಲಿ ಸಾರ್ವಜನಿಕರೊಂದಿಗೆ ಸಮಾಲೋಚನಾ ಸಭೆ ನಡೆಯಿತು.

*********ಮುಕ್ತಾಯ*********